**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 12.**

ಸಂಖ್ಯೆ: ಪಪೂಶಿಇ/ಪರೀಕ್ಷೆ/ಪೂ.ಪ.ಅ/2018-19. ದಿನಾಂಕ: 30.04.2019

**ಪರೀಕ್ಷಾ ತುರ್ತು**

**ಸು ತ್ತೋ ಲೆ**

ವಿಷಯ: ಜೂನ್ 2019ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂಖ್ಯೆ: ಪಪೂಶಿಇ/ಪರೀಕ್ಷೆ/ಪೂ.ಪ.ಅ/2018-19. ದಿನಾಂಕ: 15.04.2019

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜೂನ್ 2019ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳಿಗೆ ಅನುತ್ತೀರ್ಣ ಅಭ್ಯರ್ಥಿಗಳು ಪರೀಕ್ಷಾ ಶುಲ್ಕವನ್ನು ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆಯನ್ವಯ ಈ ಕೆಳಗಿನಂತೆ ನಿಗಧಿಪಡಿಸಲಾಗಿತ್ತು.

| ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ (ಅನುತ್ತೀರ್ಣ ಮತ್ತು ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು) Online Portal ನಲ್ಲಿ Update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 30.04.2019 | 02.05.2019 | 04.05.2019 |

ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ ಮೇರೆಗೆ ಜೂನ್ 2019 ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು / ಪರೀಕ್ಷಾ ಶುಲ್ಕವನ್ನು ಸಂದಾಯ ಮಾಡಲು ಕಡೆಯ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ (ಅನುತ್ತೀರ್ಣ ಮತ್ತು ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು) Online Portal ನಲ್ಲಿ Update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 06.05.2019 | 08.05.2019 | 10.05.2019 |

ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತೃತ ದಿನಾಂಕಗಳಲ್ಲಿ ಯಾವುದೇ ದಂಡ ಶುಲ್ಕವಿರುವುದಿಲ್ಲ. ಸದರಿ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಲ್ಲಿಸಲು ಇದೇ ಅಂತಿಮ ಅವಕಾಶವಾಗಿರುತ್ತದೆ. ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು. ಜಿಲ್ಲಾ ಉಪನಿದೇಶಕರು ಒಂದೇ ಕಂತಿನಲ್ಲಿ ಎಲ್ಲಾ ಅಭ್ಯರ್ಥಿಗಳ ಅರ್ಜಿಗಳನ್ನು ಖುದ್ದಾಗಿ ಇಲಾಖೆಗೆ ದಿನಾಂಕ 11.05.2019ರಂದು ಕೇಂದ್ರ ಕಛೇರಿಗೆ ಸಲ್ಲಿಸುವುದು. ಜೂನ್ 2019ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಕುಳಿತುಕೊಳ್ಳುವ ಎಲ್ಲಾ ಅಭ್ಯರ್ಥಿಗಳ ಅರ್ಜಿಗಳನ್ನು Online ನಲ್ಲಿ ಕಡ್ಡಾಯವಾಗಿ ದಿನಾಂಕ 06.05.2019ರ ಸಂಜೆ 5.00 ಗಂಟೆಯೊಳಗೆ Update ಮಾಡಬೇಕು. ಯಾವುದೇ ಕಾರಣಕ್ಕೂ Update **ಮಾಡದೆಯಿರುವ ವಿದ್ಯಾರ್ಥಿಗಳಿಗೆ ಪ್ರವೇಶಪತ್ರಗಳನ್ನು ನೀಡಲಾಗುವುದಿಲ್ಲ. ಇದನ್ನು ಪ್ರಾಂಶುಪಾಲರು ಗಂಭೀರವಾಗಿ ಪರಿಗಣಿಸಿ ಪರೀಕ್ಷಾ ಶುಲ್ಕ ಪಾವತಿಸಿರುವ ಎಲ್ಲಾ ರಿಪೀಟರ್ಸ್ ವಿದ್ಯಾರ್ಥಿಗಳ ಅರ್ಜಿಗಳನ್ನು** Online ನಲ್ಲಿ Upload ಮಾಡುವ ಬಗ್ಗೆ ಕ್ರಮವಹಿಸಬೇಕು. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಪ್ರಾಂಶುಪಾಲರೇ ನೇರ ಹೊಣೆಗಾರರಾಗುತ್ತಾರೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
4. ಗಣಕ ಶಾಖೆಗೆ.
5. ಇಲಾಖಾ ಇ-ಆಡಳಿತ ಶಾಖೆ (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು)